# <u>ಪ್ರಕಟಣೆ</u>

ನೇಕಾರರ ಮಕ್ಕಳಿಗೆ ಹೆಚ್ಚಿನ ಹಾಗೂ ಉನ್ನತ ಶಿಕ್ಷಣ ಪ್ರೋತ್ಸಾಹಿಸಲು ಕರ್ನಾಟಕ ರಾಜ್ಯದ ಯಾವುದೇ ಭಾಗದಲ್ಲಿರುವ ಅಧಿಕೃತವಾಗಿ ನೋಂದಣಿಯಾಗಿರುವ ಶಿಕ್ಷಣ ಸಂಸ್ಥೆಗಳು / ವಿಶ್ವವಿದ್ಯಾಲಗಳಲ್ಲಿ ಪದವಿಯ ಮುಂಚೆ ಪಿ.ಯು.ಸಿ / ಐ.ಟಿ.ಐ/ಡಿಪ್ಲೋಮಾ, ಎಲ್ಲಾ ಬಿ.ಎ/ಬಿ.ಎಸ್.ಸಿ/ಬಿ.ಕಾಂ ಇತ್ಯಾದಿ, ಎಲ್.ಎಲ್.ಬಿ/ಪ್ಯಾರಾಮೆಡಿಕಲ್/ ಬಿ.ಫಾರ್ಮ್/ ನರ್ಸಿಂಗ್ ಇತ್ಯಾದಿ ವೃತ್ತಿಪರ ಕೋರ್ಸ್‌ಗಳು, ಎಂ.ಬಿ.ಬಿ.ಎಸ್/ಬಿ.ಇ/ಬಿ.ಟೆಕ್ ಮತ್ತು ಎಲ್ಲಾ ಸ್ನಾತಕೋತ್ತರ ಕೋರ್ಸ್‌ಗಳನ್ನು ವ್ಯಾಸಂಗ ಮಾಡುತ್ತಿರುವ ನೇಕಾರರ ಮಕ್ಕಳಿಗೆ "ವಿದ್ಯಾರ್ಥಿವೇತನ" ನೀಡುವ ಯೋಜನೆಯನ್ನು ಅನುಷ್ಠಾನಗೊಳಿಸಲು ಸರ್ಕಾರದಿಂದ ಆದೇಶಿಸಲಾಗಿದೆ.

**ಹಂತ - 1**

ಇಲಾಖೆಯಲ್ಲಿ ಈಗಾಗಲೇ ನೇಕಾರ ಸಮ್ಮಾನ್ ಯೋಜನೆಯಡಿ ನೊಂದಾಯಿಸಲಾಗಿರುವ ಕೈಮಗ್ಗ ನೇಕಾರರು ಹಾಗೂ ಚಾಲ್ತಿಯಲ್ಲಿರುವ ವಿದ್ಯುತ್‌ಮಗ್ಗ ಹಾಗೂ ಮಗ್ಗ ಪೂರ್ವ ಚಟುವಟಿಕೆಗಳ ಸಮೀಕ್ಷೆಯಲ್ಲಿ ಗುರುತಿಸಿರುವ ನೇಕಾರರ ಮಾಹಿತಿಯನ್ವಯ ನೇಕಾರರ ಮಕ್ಕಳನ್ನು ಗುರುತಿಸಲಾಗುವುದು.

**ಹಂತ - 2**

ಆದುದರಿಂದ ರಾಜ್ಯದ ನೋಂದಾಯಿತ ನೇಕಾರರು ಅವರ ಮಕ್ಕಳನ್ನು ಗುರುತಿಸುವ ಸಲುವಾಗಿ ಆನ್‌ಲೈನ್ ಮೂಲಕ "ಸೇವಾ ಸಿಂಧು" ತಂತ್ರಾಂಶದ **ಕರ್ನಾಟಕ ಒನ್ ಮತ್ತು ಗ್ರಾಮ ಒನ್ ರಲ್ಲಿ ಮಾತ್ರ ಈ ಸೇವೆ ಲಭ್ಯವಿರುತ್ತದೆ.** ಅದರಂತೆ ನಿಗದಿತ ಶುಲ್ಕವನ್ನು ಪಾವತಿಸಿ ಅರ್ಜಿಯನ್ನು ಸಲ್ಲಿಸುವುದು.

**ಹಂತ - 3**

ತದನಂತರ ವಿದ್ಯಾರ್ಥಿವೇತನಕ್ಕಾಗಿ ನೇಕಾರರ ಮಕ್ಕಳು ರಾಜ್ಯ ವಿದ್ಯಾರ್ಥಿವೇತನ ತಂತ್ರಾಂಶ (SSP) ದಲ್ಲಿ ಆನ್‌ಲೈನ್ ಮೂಲಕ ಪ್ರತ್ಯೇಕವಾಗಿ ಅರ್ಜಿಯನ್ನು ಸಲ್ಲಿಸುವುದು.

.... 2

**ಹಂತ - 4**

ಸೇವಾ ಸಿಂಧು ಹಾಗೂ SSP ಪೋರ್ಟಲ್‌ನ ಮಾಹಿತಿ ಹೊಂದಾಣಿಕೆಯಾದ ನಂತರ ಸದರಿ ಯೋಜನೆಯ ಮಾರ್ಗಸೂಚಿಯನ್ವಯ Post Metric ಹಾಗೂ ಉನ್ನತ ವಿದ್ಯಾಭ್ಯಾಸ ಮಾಡುತ್ತಿರುವ ವಿದ್ಯಾರ್ಥಿಗಳ ಆಧಾರ್ ಜೋಡಣೆಯಾಗಿರುವ ಬ್ಯಾಂಕ್ ಖಾತೆಗಳಿಗೆ ನೇರ ನಗದು ವರ್ಗಾವಣೆ (ಡಿ.ಬಿ.ಟಿ) ಪದ್ಧತಿಯ ಮೂಲಕ ವಿದ್ಯಾರ್ಥಿವೇತನದ ಮೊತ್ತವನ್ನು ಪಾವತಿಸಲಾಗುವುದು.

ಹೆಚ್ಚಿನ ವಿವರ / ಮಾಹಿತಿಗಾಗಿ ಇಲಾಖೆಯ ವಿಭಾಗೀಯ / ಜಿಲ್ಲಾ ಮಟ್ಟದ ಕಛೇರಿಗಳ ಸಂಪರ್ಕಕ್ಕಾಗಿ ಇಲಾಖೆಯ ವೆಬ್‌ಸೈಟ್ www.karnatakadht.org ವೀಕ್ಷಿಸುವುದು.

ಜವಳಿ ಅಭಿವೃದ್ಧಿ ಆಯುಕ್ತರು ಹಾಗೂ
ನಿರ್ದೇಶಕರು ಕೈಮಗ್ಗ ಮತ್ತು ಜವಳಿ